ಕೋಲಾರ ಡಿಸ್ಟ್ರಿಕ್ಟ್.

ತಾರೀಖು ನೇ ಮಾಹೆ ನವಂಬರ್ 1890.

ನಂ. 1. ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮಪ್ರಕಾರ ಜಪ್ತೀ ಮಾಡಲ ಟ್ಟಿರುವ ಈ ಕೆಳಗೆ ಕಂಡ ಜೋಡೀ ಗ್ರಾಮಗಳು ಇದರಡಿಕಂಡ ತಖ್ತೆಯಲ್ಲಿ ನಮೂದಿಸಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗ ವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು, ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಯೆ 11 ಘಂಟೆಗೆ ಹರಾಜು ಷುರುವಾಗಿ ಉಳಿಕೆ ಯಾ ವದೂ ಇಲ್ಲದೆ ಗ್ರಾಮಗಳು ಚಡ ದರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಬಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ ಡೆಪ್ಯುಟೆ ಕಮ್ಮಿಷನರವರು ತಮ್ಮ ಯಿಚ್ಛಾನುಸಾರೀಮೇಲೆ ಪೂರಾ ಗ್ರಾಮಗಳನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗ್ ಪೈಕಿ ಕೀಕಡಾ 25 ರೂಪಾಯಿ ಡಿಪಾಜಿಟ್ ಯಿಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಯಿದ್ದರೆ ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳೆ ಹರಾಜು ಹಾಕಿಸಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜೂ ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವರ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಿಗೆ ಹಕ್ಕುಬೆಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಅಥವಾ ಮೈಸೂರು ಲ್ಯಾಂಡ್ ರೆವಿನ್ಯೂ ಕೋಡಿನ 170ನೇ ಸೆಕ್ಷನ್ ಅನುಸಾರವಾಗಿ ಜಾಮೀನ್ ಕೊಟ್ಟಾಗ್ಯೂ ಹರಾಜು ಮವುಕೂಫ್ ಮಾಡಲ್ಪಡತಕ್ಕದ್ದು.

7. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜು ಖಾಯಂ ಮಾಡಲ್ಪಟ್ಟ ಕೂಡ್ಲೆ ಗ್ರಾಮವು ಆತನ ಸುಪರ್ದು ಮಾಡಲ್ಪಟ್ಟು ಕ್ರಯದಾರನ ಹೆಸರಿನಲ್ಲಿ ರೆಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟೆ ಕಮ್ಮಿಷನರವರಿಂದ ರುಜೂ ಮೊಹರ್ ಮಾಡೋಣಾದ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲಿನಲ್ಲಾಗಲಿ ಆಂದಾಜು ಬೀಜವರೀ ವಿಷಯದಲ್ಲಾಗಲಿ ಇರುವ ಗಲ್ಲತ್ತುಗಳಿಗೆ ಸರಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

8. ಪರಂತು ಸದರೀ ಹರಾಜಿನಿಂದ ನುಕ್ಸಾನಪಟ್ಟುಂತೆ ಯಿಣಿಸುವ ಜನಗಳು ಹರಾಜು ತಾರೀಖು ಲಾಗಾಯತು 90 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿ ಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲ್‌ನಲ್ಲಿ ಆಗುವ ಆಖೈರ್ ಹುಕುಮಿಗೆ ಸದರೀ ಕ್ರಯವು ಬಳಪಟ್ಟು ಯಿರುತ್ತೆ.

ಡಿಸ್ಟ್ರಿಕ್ಟ್.	ತಾಲ್ಲೂಕು.	ಹೋಬ್ಳಿ.	ಗ್ರಾಮ.	ಜೋಡೀದಾರರ ಹೆಸರು.	ಅಂದಾಜಾ ಬೀಜವರಿ.	ಅಂದಾಜಾ ಹುಟ್ಟುವಳಿ ಯಾ ಬೇರೀಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟ್‌ರೆಂಟ್.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂಥಾ ಸರ್ಕಾರದ ಕಂದಾಯದ ಬಾಕಿ.	ಹರಾಜ್ ತಾರೀಖು ವಗೈರೆ.
					ಯೆ. ಗುಂ. ಗ.	ರೂ. ಆ. ಪೈ.	ರೂ. ಆ. ಪೈ	ರೂ. ಆ. ಪೈ.	
ಕೋಲಾರ.	ಬಿನರಿಂಗನಪೇಟೆ	ಬೂದಿಕೋಟೆ	ಚಂನಹಳ್ಳಿ ಜೋಡಿಗ್ರಾಮ	ವೆಂಕಟರಾಮಾಶಾಸ್ತ್ರಿ ಮತ್ತು ಕೃಷ್ಣಶಾಸ್ತ್ರಿ	52 20 0	90 0 0	71 1 0	354 4 0	ತಾಲ್ಲೂಕು ಕಚೇರಿಯಲ್ಲಿ ಅಮಲ್ದಾರ್ ರ್ ರೂಬರೂ 91ನೇ ಜನವರೀ ತಾರೀಖು 15ರಲ್ಲಿ
		ದಾಸರ ಹೊಸಹಳ್ಳಿ	ವಾದಂಡಹಳ್ಳಿ ಜೋಡಿಗ್ರಾಮ	ಕೃಷ್ಣಾಚಾರ್ಯರು	340 0 0	260 0 0	179 10 10	1192 8 1	ಹರಾಜು ತಾರೀಖಿನವರಿಗೆ ಬಡ್ಡಿ ಸಹ ಕೊಡಬೇಕು ಡಿಟೋ ಡಿಟೋ 16ರಲ್ಲಿ
		ಬಿನರಿಂಗನಪೇಟೆ	ನಾಗನಾಥಪುರ ಜೋಡಿಗ್ರಾಮ	ವರದರಾಜಯ್ಯಂಗಾರ್ ಮತ್ತು ಸುಬ್ಬಾಭಟ್ಟ	ಖ. ಕೂ. ಪ. 13 19 8	100 0 0	29 11 0	76 0 11	ಡಿಟೋ 17ರಲ್ಲಿ

ಪರಾ.—ಜೋಡೀದಾರರುಗಳೆಂದಲಾಗಲಿ ಬಾಧ್ಯತೆ ಮೂಲಕ ಇವರುಗಳಿಗೆ ಹಿಂದೆ ಯಿದ್ದವರಿಂದ ಆಗಲಿ ಮಾಡಲ್ಪಟ್ಟ ತಮೋಂ ಹಿಡುವಳಿಗಾಗಲಿ ದೇಣಿಗೆಗಳಿಗಾಗಲಿ ಮತ್ತು ಹಕ್ಕುಗಳಿಗಾಗಲಿ ಅಥವಾ ಮತ್ಯಾವ ಸಂಬಂಧಗಳಿಗಾಗಲಿ ಸದರೀ ಹರಾಜು ಬಳಪಟ್ಟಿರುವದಿಲ್ಲ.

ಸಿ. ಮಾದೈಯ್ಯ, ಡೆಪ್ಯುಟೆ ಕಮ್ಮಿಷನರ್.